# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು** | : | **ಡಾ|| ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1035** |
| **ಉತ್ತರಿಸಬೇಕಾದ ದಿನಾಂಕ** | : | **27-12-2022** |
| **ಉತ್ತರಿಸಬೇಕಾದ ಸಚಿವರು** | : | **ಸಹಕಾರ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಹಕಾರ ಇಲಾಖೆ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಭೂ ಅಭಿವೃದ್ಧಿ ಬ್ಯಾಂಕ್, ಜಿಲ್ಲಾ ಸಹಕಾರ ಬ್ಯಾಂಕ್, ಅಪೆಕ್ಸ್ ಬ್ಯಾಂಕ್ ಹಾಗೂ ಇನ್ನಿತರ ಸಹಕಾರ ಬ್ಯಾಂಕ್‌ಗಳ ಅಧ್ಯಕ್ಷರ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮೀಸಲು ನೀಡಲಾಗುತ್ತಿದೆಯೇ; | ರಾಜ್ಯದ ಪ್ರಾಥಮಿಕ ಭೂ ಅಭಿವೃದ್ಧಿ ಬ್ಯಾಂಕ್, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್, ಅಪೆಕ್ಸ್ ಬ್ಯಾಂಕ್ ಹಾಗೂ ಇನ್ನಿತರ ಸಹಕಾರ ಬ್ಯಾಂಕ್‌ಗಳಿಗೆ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 29ಎ ಮತ್ತು ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13 ರಿಂದ 14 ರವರೆಗಿನ ಅವಕಾಶಗಳ ರೀತ್ಯಾ ಪ್ರಾಥಮಿಕವಾಗಿ ಆಡಳಿತ ಮಂಡಳಿಗೆ ಚುನಾವಣೆ ನಡೆಸಲಾಗುತ್ತದೆ.<br>ಯಾವ ಸಹಕಾರ ಸಂಘ/ಬ್ಯಾಂಕಿನಲ್ಲಿ ವ್ಯಕ್ತಿಗತ ಸದಸ್ಯರಿರುವರೋ ಅಂತಹ ಬ್ಯಾಂಕ್ ಮತ್ತು ಸಹಕಾರ ಸಂಘಗಳಲ್ಲಿ ಪ್ರಾಥಮಿಕ ಚುನಾವಣಾ ಸಂದರ್ಭದಲ್ಲಿ ಆಡಳಿತ ಮಂಡಳಿ ಸದಸ್ಯರಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ನಿರ್ದೇಶಕರು ಆಯ್ಕೆಯಾಗುವಂತೆ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 28ಎ ರಡಿ ಅವಕಾಶ ಕಲ್ಪಿಸಲಾಗಿದೆ.<br>ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಮತ್ತು ಅಪೆಕ್ಸ್ ಬ್ಯಾಂಕ್‌ಗಳಲ್ಲಿ ವ್ಯಕ್ತಿಗತ ಸದಸ್ಯರು ಹೊಂದಿರುವುದಿಲ್ಲವಾದ್ದರಿಂದ ಆಡಳಿತ ಮಂಡಳಿ ನಿರ್ದೇಶಕರ ಆಯ್ಕೆಯಲ್ಲಿ ಮೀಸಲಾತಿ ನೀಡಲು ಅವಕಾಶಗಳಿರುವುದಿಲ್ಲ.<br>ಅಲ್ಲದೆ, ಯಾವುದೇ ಸಹಕಾರ ಬ್ಯಾಂಕ್ ಮತ್ತು ಸಂಘಗಳಲ್ಲಿ ಅಧ್ಯಕ್ಷರ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಮೀಸಲಾತಿ ಕಲ್ಪಿಸಲು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಮತ್ತು ಸಹಕಾರ ಸಂಘಗಳ ನಿಯಮಗಳು 1960 ರಲ್ಲಿ ಅವಕಾಶವಿರುವುದಿಲ್ಲ. |
| ಆ) | ಇಲ್ಲವಾದಲ್ಲಿ, ಈ ಕ್ಷೇತ್ರದಲ್ಲಿನ ಅಧ್ಯಕ್ಷರ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮೀಸಲು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಪ್ರಸ್ತುತ ಸರ್ಕಾರದ ಮುಂದೆ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಸಿಒ 128 ಸಿಎಲ್‌ಎಂ 2022

(ಎಸ್.ಟಿ. ಸೋಮಶೇಖರ್)
ಸಹಕಾರ ಇಲಾಖೆ